625 (965) ಶ್ರೀ ರಾಜೇಂದ್ರನ್ ಎಸ್ (ಕೆ ಜಿ ಎಫ್) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಿನಾಂಕ 30–12–2006ರ ದಿನ ಪತ್ರಿಕೆಯಲ್ಲಿ "ಗಂಗಾ ಕಲ್ಯಾಣ" ಹಣ ಖರ್ಚಾದದ್ದು ಹೇಗೆ ಎಂಬ ಶೀರ್ಷಿಕೆಯಲ್ಲಿ ಡಾ ಬಿ ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು ಕೊಳವೆ ಬಾವಿಗಳ ಟೆಂಡರ್ ಪ್ರಕ್ರಿಯೆಯನ್ನು ಅಂತಿಮಗೊಳಿಸದೆ ಟೆಂಡರ್ ಸಲ್ಲಿಸಿದವರೊಂದಿಗೆ ಮಾತುಕತೆಗೆ ಮುಂದಾಗಿರುವುದಾಗಿ ವರದಿಯಾಗಿರುವುದು ನಿಜವಲ್ಲವೇ?

ಆ) ಹಾಗಿದ್ದಲ್ಲಿ, ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದೆಯೆ?

ಇ) ಹಾಗಿಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣವೇನು?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

ಅ) ಟೆಂಡರ್ ಪ್ರಕ್ರಿಯೆ ಅಂತಿಮಗೊಳಿಸದೇ ಟೆಂಡರ್ ಸಲ್ಲಿಸಿದವರೊಂದಿಗೆ ಮಾತುಕತೆಗೆ ಮುಂದಾಗಿರುವುದಾಗಿ ದಿನಾಂಕ 30–12–06ರ ದಿನಪತ್ರಿಕೆಯಲ್ಲಿ ವರದಿ ಪ್ರಕಟವಾಗಿರುವುದು ನಿಜವಲ್ಲ

ಆ) ಹೌದು, ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದೆ

ಇ) ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

626 (966) ಶ್ರೀ ರಾಜೇಂದ್ರನ್ ಎಸ್(ಕೆ ಜಿ ಎಫ್) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಗಂಗಾ ಕಲ್ಯಾಣ ಯೋಜನೆಗೆ ನಿಗದಿಪಡಿಸಿರುವ ಅನುದಾನ ಮತ್ತು ಖರ್ಚಾಗಿರುವ ಹಣವೆಷ್ಟು?

ಆ) ಹಾಗಿದ್ದಲ್ಲಿ, ವಿಳಂಬಕ್ಕೆ ಕಾರಣವೇನು?

ಇ) ಕೆ ಜಿ ಎಫ್ ಮತಕ್ಷೇತ್ರಕ್ಕೆ ಮಂಜೂರಾಗಿರುವ ಕೊಳವೆ ಬಾವಿಗಳೆಷ್ಟು ಇವುಗಳನ್ನು ಅನುಷ್ಠಾನಗೊಳಿಸಲಾಗಿದೆಯೇ?

ಈ) ಹಾಗಿದ್ದಲ್ಲಿ, ಗುತ್ತಿಗೆದಾರರು ಯಾರು?